All India Radio: Bangalore
National Bulletin In Kannada
13.01.2026 19.35 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಶಕ್ಸ್‌ಗಮ್ ಕಣಿವೆಗೆ ಸಂಬಂಧಿಸಿದಂತೆ ಚೀನಾ-ಪಾಕಿಸ್ತಾನ ಒಪ್ಪಂದ ಕಾನೂನುಬಾಹಿರ - ಭಾರತ ಪುನರುಚ್ಚಾರ
- ಬ್ರಿಕ್ಸ್ ಶೃಂಗಸಭೆ; ಜಾಗತಿಕ ಕಲ್ಯಾಣಕ್ಕಾಗಿ ದೇಶಗಳ ಸಾಮರ್ಥ್ಯ ಒಟ್ಟುಗೂಡಿಸಲು ಭಾರತ ಯತ್ನ - ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್
- ಜೈವಿಕ ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತ ಶೀಘ್ರಗತಿಯ ಅಭಿವೃದ್ಧಿ - ಕೇಂದ್ರ ಸಚಿವ ಅಮಿತ್ ಶಾ
- ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್: ಗುಜರಾತ್ ಜೈಂಟ್ಸ್ ವಿರುದ್ಧ ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ಫೀಲ್ಡಿಂಗ್ ಆಯ್ಕೆ

*****************

ಜಮ್ಮು ಮತ್ತು ಕಾಶ್ಮೀರದ ಶಕ್ಸ್‌ಗಮ್ ಕಣಿವೆಯ ಕುರಿತು ಭಾರತದ ಪ್ರಾದೇಶಿಕ ನಿಲುವನ್ನು ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಪುನರುಚ್ಚರಿಸಿದ್ದಾರೆ. ಕಣಿವೆಗೆ ಸಂಬಂಧಿಸಿದಂತೆ ಚೀನಾ ಮತ್ತು ಪಾಕಿಸ್ತಾನ ನಡುವಿನ ೧೯೬೩ರ ಒಪ್ಪಂದವು ಕಾನೂನು ಬಾಹಿರವಾಗಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಶಕ್ಸ್‌ಗಮ್ ಕಣಿವೆಯ ಕುರಿತು ಚೀನಾ ವಿದೇಶಾಂಗ ಸಚಿವಾಲಯದ ವಕ್ತಾರರ ಪ್ರತಿಕ್ರಿಯೆ ಕುರಿತು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಜನರಲ್ ಉಪೇಂದ್ರ ದ್ವಿವೇದಿ, ಕಣಿವೆಯಲ್ಲಿ ಯಾವುದೇ ಚಟುವಟಿಕೆಯನ್ನು ಭಾರತ ಅನುಮೋದಿಸುವುದಿಲ್ಲ. ಚೀನಾದೊಂದಿಗೆ ವಾಸ್ತವಿಕ ನಿಯಂತ್ರಣ ರೇಖೆಯ ಪರಿಸ್ಥಿತಿ ಸ್ಥಿರವಾಗಿದೆ. ಆದರೆ, ಅದಕ್ಕೆ ನಿರಂತರ ಜಾಗರೂಕತೆಯ ಅಗತ್ಯವಿದೆ ಎಂದು ಹೇಳಿದರು.

ಕಾರ್ಯಾಚರಣೆ ಮತ್ತು ಪ್ರತಿಕ್ರಿಯೆ ನೀಡಲು ಸಂಪೂರ್ಣ ಸ್ವಾತಂತ್ರ್ಯದೊಂದಿಗೆ ಭಾರತದ ಮೂರು ಸೇನೆಗಳ ಸಂಯೋಜನೆಗೆ ಆಪರೇಷನ್ ಸಿಂಧೂರ ಅತ್ಯುತ್ತಮ ಉದಾಹರಣೆಯಾಗಿದೆ ಎಂದರು.

ಆಪರೇಷನ್ ಸಿಂಧೂರ ಮುಂದುವರೆದಿದೆ. ಎದುರಾಳಿ ರಾಷ್ಟ್ರದಿಂದ ಯಾವುದೇ ದುಸ್ಸಾಹಸವನ್ನು ಪರಿಣಾಮಕಾರಿಯಾಗಿ ನಿಭಾಯಿಸಲಾಗುವುದು. ಕಳೆದ ವರ್ಷ ೩೧ ಭಯೋತ್ಪಾದಕರನ್ನು ಹೊಡೆದುರುಳಿಸಲಾಗಿದೆ. ಈ ಪೈಕಿ ಶೇಕಡ ೬೫ ರಷ್ಟು ಭಯೋತ್ಪಾದಕರು ಪಾಕಿಸ್ತಾನ ಮೂಲದವರಾಗಿದ್ದಾರೆ ಎಂದು ಜನರಲ್ ಉಪೇಂದ್ರ ದ್ವಿವೇದಿ ತಿಳಿಸಿದರು.

*****************

ಭಾರತದ ಅಧ್ಯಕ್ಷತೆಯಲ್ಲಿ ನಡೆಯಲಿರುವ ಬ್ರಿಕ್ಸ್ ೨೦೨೬ ಶೃಂಗಸಭೆಯಲ್ಲಿ ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಯು ಪ್ರಮುಖ ಆದ್ಯತೆಗಳಾಗಿರುತ್ತವೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.

ಬ್ರಿಕ್ಸ್ ಶೃಂಗಸಭೆಯ ಲಾಂಛನ, ಧ್ಯೇಯವಾಕ್ಯ ಮತ್ತು ವೆಬ್‌ಸೈಟ್ ಬಿಡುಗಡೆ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಈ ಆದ್ಯತೆಗಳು ಬ್ರಿಕ್ಸ್ ದೇಶಗಳ ಗುಂಪಿನ ಮೂರು ಮೂಲ ಸ್ತಂಭಗಳಾದ ರಾಜಕೀಯ ಮತ್ತು ಭದ್ರತೆ, ಆರ್ಥಿಕತೆ ಮತ್ತು ಹಣಕಾಸು ಹಾಗೂ ಸಾಂಸ್ಕೃತಿಕ ಮತ್ತು ಜನರಿಂದ ಜನರ ವಿನಿಮಯಗಳಲ್ಲಿ ಸೂಕ್ತವಾದ ಚೌಕಟ್ಟನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಶೃಂಗಸಭೆಯ ಸಮಯದಲ್ಲಿ ಜಾಗತಿಕ ಕಲ್ಯಾಣಕ್ಕಾಗಿ ಬ್ರಿಕ್ಸ್ ದೇಶಗಳ ಸಾಮರ್ಥ್ಯವನ್ನು ಒಟ್ಟುಗೂಡಿಸಲು ಭಾರತ ಪ್ರಯತ್ನಿಸುತ್ತದೆ. ಈ ವರ್ಷ ಬ್ರಿಕ್ಸ್, ೨೦ ವರ್ಷಗಳನ್ನು ಪೂರೈಸಲಿದೆ. ಉದಯೋನ್ಮುಖ ಮಾರುಕಟ್ಟೆಗಳು ಮತ್ತು ಅಭಿವೃದ್ಧಿಶೀಲ ಆರ್ಥಿಕತೆಗಳ ನಡುವಿನ ಸಹಕಾರಕ್ಕಾಗಿ ಮಹತ್ವದ ವೇದಿಕೆಯಾಗಿ ಬ್ರಿಕ್ಸ್ ವಿಕಸನಗೊಂಡಿದೆ ಎಂದು ಸಚಿವ ಡಾ.ಎಸ್.ಜೈಶಂಕರ್ ಹೇಳಿದರು.

*****************

ಭಾರತದ ಅಧ್ಯಕ್ಷತೆಯಲ್ಲಿ ನಡೆಯಲಿರುವ ಬ್ರಿಕ್ಸ್ ೨೦೨೬ ಶೃಂಗಸಭೆಯಲ್ಲಿ ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಯು ಪ್ರಮುಖ ಆದ್ಯತೆಗಳಾಗಿರುತ್ತವೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.

ಬ್ರಿಕ್ಸ್ ಶೃಂಗಸಭೆಯ ಲಾಂಛನ, ಧ್ಯೇಯವಾಕ್ಯ ಮತ್ತು ವೆಬ್‌ಸೈಟ್ ಬಿಡುಗಡೆ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಈ ಆದ್ಯತೆಗಳು ಬ್ರಿಕ್ಸ್ ದೇಶಗಳ ಗುಂಪಿನ ಮೂರು ಮೂಲ ಸ್ತಂಭಗಳಾದ ರಾಜಕೀಯ ಮತ್ತು ಭದ್ರತೆ, ಆರ್ಥಿಕತೆ ಮತ್ತು ಹಣಕಾಸು ಹಾಗೂ ಸಾಂಸ್ಕೃತಿಕ ಮತ್ತು ಜನರಿಂದ ಜನರ ವಿನಿಮಯಗಳಲ್ಲಿ ಸೂಕ್ತವಾದ ಚೌಕಟ್ಟನ್ನು ಒದಗಿಸುತ್ತದೆ ಎಂದು ತಿಳಿಸಿದರು.

ಶೃಂಗಸಭೆಯ ಸಮಯದಲ್ಲಿ ಜಾಗತಿಕ ಕಲ್ಯಾಣಕ್ಕಾಗಿ ಬ್ರಿಕ್ಸ್ ದೇಶಗಳ ಸಾಮರ್ಥ್ಯವನ್ನು ಒಟ್ಟುಗೂಡಿಸಲು ಭಾರತ ಪ್ರಯತ್ನಿಸುತ್ತದೆ. ಈ ವರ್ಷ ಬ್ರಿಕ್ಸ್, ೨೦ ವರ್ಷಗಳನ್ನು ಪೂರೈಸಲಿದೆ. ಉದಯೋನ್ಮುಖ ಮಾರುಕಟ್ಟೆಗಳು ಮತ್ತು ಅಭಿವೃದ್ಧಿಶೀಲ ಆರ್ಥಿಕತೆಗಳ ನಡುವಿನ ಸಹಕಾರಕ್ಕಾಗಿ ಮಹತ್ವದ ವೇದಿಕೆಯಾಗಿ ಬ್ರಿಕ್ಸ್ ವಿಕಸನಗೊಂಡಿದೆ ಎಂದು ಸಚಿವ ಡಾ.ಎಸ್.ಜೈಶಂಕರ್ ಹೇಳಿದರು.

*****************

ದಯೆಯೆಂಬುದು ಪ್ರಾಣಿಗಳಿಗೆ ಮಾತ್ರ ಸೀಮಿತವೇ ಮತ್ತು ಅದು ಮನುಷ್ಯರಿಗೆ ಅನ್ವಯಿಸುವುದಿಲ್ಲವೇ ಎಂದು ಸಾರ್ವಜನಿಕ ಸ್ಥಳಗಳಲ್ಲಿ ಬೀದಿನಾಯಿಗಳಿಗೆ ಆಹಾರ ನೀಡುವ ಸಂಸ್ಥೆ ಮತ್ತು ಜನರನ್ನು ಉದ್ದೇಶಿಸಿ ಸುಪ್ರೀಂ ಕೋರ್ಟ್ ಪ್ರಶ್ನಿಸಿದೆ. ಹೊಣೆಗಾರಿಕೆಯ ಬಗ್ಗೆ ಪ್ರಶ್ನಿಸುತ್ತಾ, ಬೀದಿನಾಯಿಗಳು ಮಗುವೊಂದನ್ನು ಕೊಂದರೆ, ಯಾರನ್ನು ಜವಾಬ್ದಾರಿಯನ್ನಾಗಿಸುವುದು ಎಂದು ಪ್ರಶ್ನಿಸಿದೆ.

ಪ್ರಾಣಿಗಳ ಸಂತಾನ ನಿಯಂತ್ರಣ ನಿಯಮಗಳು ಮುಖ್ಯವಾಗಿ ಪ್ರಾಣಿಗಳ ಸಂತಾನಹರಣದ ಬಗ್ಗೆ ಕೇಂದ್ರಿತವಾಗಿದ್ದು, ಅಪಾಯಕಾರಿ ನಡವಳಿಯ ನಾಯಿ ಅಥವಾ ಅಂತಹ ಪ್ರಾಣಿಗಳಿಂದಾಗುವ ಅಪಾಯವನ್ನು ಪರಿಹರಿಸುವ ಬಗ್ಗೆ ನಿರ್ಲಕ್ಷವಹಿಸಿವೆ ಎಂದು ಹಿರಿಯ ನ್ಯಾಯವಾದಿ ಅರವಿಂದ್ ದಾತಾರ್ ವಾದ ಮಂಡಿಸಿದರು.

ಎಲ್ಲಾ ಬೀದಿನಾಯಿಗಳನ್ನು ತೆರವುಗೊಳಿಸಿ ಎಂದು ನ್ಯಾಯಪೀಠ ಹೇಳಿಲ್ಲ. ಆದರೆ, ಸಂತಾನ ನಿಯಂತ್ರಣ ನಿಯಮಗಳನ್ನು ಸಮರ್ಪಕವಾಗಿ ಜಾರಿಗೊಳಿಸುತ್ತಿಲ್ಲ. ಬೀದಿನಾಯಿಗಳಿಂದ ವನ್ಯಜೀವಿಯಾದ ಹುಲಿಯು ಸೇರಿದಂತೆ ಅನೇಕ ಪ್ರಾಣಿಗಳಿಗೆ ರೋಗ ಪಸರಿಸುವ ಸಾಧ್ಯತೆಯನ್ನು ತಳ್ಳಿಹಾಕಲಾಗದು ಎಂದು ನ್ಯಾಯಪೀಠ ಎಚ್ಚರಿಸಿತು.

ನಾಯಿಗಳು ಮತ್ತು ಮನುಷ್ಯರನ್ನು ವಿರುದ್ಧವೆಂದು ಪರಿಗಣಿಸಬಾರದು. ಇದೊಂದು ಪರಿಸರ ಸಮತೋಲನದ ವಿಷಯವಾಗಿ ನೋಡಬೇಕು ಎಂದು ಹಿರಿಯ ನ್ಯಾಯವಾದಿ ವಿಕಾಸ್ ಸಿಂಗ್ ನ್ಯಾಯಾಲಕ್ಕೆ ಮನವಿ ಮಾಡಿದರು.

ಸಂತಾನಹರಣವೇ ಬೀದಿನಾಯಿಗಳ ನಿಯಂತ್ರಣಕ್ಕೆ ಪರಿಣಾಮಕಾರಿ ಮಾರ್ಗ. ಆದರೆ ಸಂಬಂಧಿತ ಸರ್ಕಾರಿ ಸಂಸ್ಥೆಗಳು ಇವುಗಳನ್ನು ಸಮರ್ಪಕವಾಗಿ ಮಾಡುತ್ತಿಲ್ಲ ಎಂದು ಹಿರಿಯ ನ್ಯಾಯವಾದಿ ಮೆನಕಾ ಗುರುಸ್ವಾಮಿ ವಾದಿಸಿದರು.

*****************

ಸರ್ಕಾರದ ಹಸ್ತಕ್ಷೇಪದ ನಂತರ ೧೦ ನಿಮಿಷಗಳ ವಿತರಣಾ ಸೇವೆಯ ಗಡುವನ್ನು ತೆಗೆದುಹಾಕಲು ಬ್ಲಿಂಕಿಟ್, ಜೆಪ್ಟೊ, ಜೊಮಾಟೊ ಮತ್ತು ಸ್ವಿಗ್ಗಿ ಸೇರಿದಂತೆ ಪ್ರಮುಖ ಕಂಪನಿಗಳು ಒಪ್ಪಿಕೊಂಡಿವೆ.

ಗಿಗ್ ಕೆಲಸಗಾರರಿಗೆ ಹೆಚ್ಚಿನ ಸುರಕ್ಷತೆ, ಭದ್ರತೆ ಮತ್ತು ಸುಧಾರಿತ ಕೆಲಸದ ಪರಿಸ್ಥಿತಿಗಳನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಈ ಕ್ರಮ ಹೊಂದಿದೆ.

ವಿತರಣಾ ಸಮಯಕ್ಕೆ ಸಂಬಂಧಿಸಿದ ಕಳವಳಗಳನ್ನು ಪರಿಹರಿಸಲು ಈ ಸಂಸ್ಥೆಗಳೊಂದಿಗೆ ಸಭೆ ನಡೆಸಲಾಗಿದೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ.

ಸಭೆಯ ನಂತರ, ಇ-ಕಾಮರ್ಸ್ ಪ್ಲಾಟ್‌ಫಾರ್ಮ್ ಬ್ಲಿಂಕಿಟ್, ಈಗಾಗಲೇ ಸರ್ಕಾರದ ನಿರ್ದೇಶನದ ಮೇರೆಗೆ ಕಾರ್ಯನಿರ್ವಹಿಸಿದೆ ಮತ್ತು ೧೦ ನಿಮಿಷಗಳ ವಿತರಣಾ ಭರವಸೆಯನ್ನು ತನ್ನ ಬ್ರ್ಯಾಂಡಿಂಗ್‌ನಿಂದ ತೆಗೆದುಹಾಕಿದೆ ಎಂದು ಮೂಲಗಳು ತಿಳಿಸಿವೆ.

ಮುಂಬರುವ ದಿನಗಳಲ್ಲಿ ಇತರೆ ಕಂಪನಿಗಳು ಈ ನಿರ್ದೇಶನವನ್ನು ಅನುಸರಿಸುವ ನಿರೀಕ್ಷೆಯಿದೆ.

*****************

ಭಾರತದಲ್ಲಿ ಮುಂಬರುವ ಎಐ ಇಂಪ್ಯಾಕ್ಟ್ ಶೃಂಗಸಭೆ ಕುರಿತು ಚರ್ಚಿಸಲು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ಸಚಿವ ಅಶ್ವಿನಿ ವೈಷ್ಣವ್ ಅಮೆರಿಕದ ಶ್ವೇತಭವನದಲ್ಲಿಂದು ಅಮೆರಿಕ ಅಧ್ಯಕ್ಷರ ಸಹಾಯಕ ಮೈಕೆಲ್ ಕ್ರಟಿಯೋಸ್ ಅವರನ್ನು ಭೇಟಿಯಾದರು. ಇದೇ ವೇಳೆ, ಅಮೆರಿಕದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್ ಆಯೋಜಿಸಿದ್ದ ನಿರ್ಣಾಯಕ ಖನಿಜಗಳ ಸಚಿವರ ಸಭೆಯಲ್ಲಿ ಅವರು ಭಾಗವಹಿಸಿದ್ದರು.

ಭಾರತದ ಉತ್ಪಾದನಾ ಸಾಮರ್ಥ್ಯ ಮತ್ತು ವೇಗವಾಗಿ ಬೆಳೆಯುತ್ತಿರುವ ಎಲೆಕ್ಟ್ರಾನಿಕ್ಸ್ ವಲಯದ ಸ್ಥಿತಿಸ್ಥಾಪಕತ್ವವನ್ನು ಹೆಚ್ಚಿಸಲು ನಿರ್ಣಾಯಕ ಖನಿಜ ಪೂರೈಕೆ ಸರಪಳಿಗಳನ್ನು ಬಲಪಡಿಸುವುದು ಅತ್ಯಗತ್ಯ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

*****************

ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆಯ ಬಗ್ಗೆ ವಿರೋಧ ಪಕ್ಷಗಳು ಸಾರ್ವಜನಿಕರನ್ನು ದಾರಿ ತಪ್ಪಿಸುತ್ತಿವೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಮತ್ತು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಟೀಕಿಸಿದ್ದಾರೆ.

ಉತ್ತರ ಪ್ರದೇಶದ ಲಖನೌದಲ್ಲಿಂದು ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಗ್ರಾಮೀಣ ಭಾರತದ ಉದ್ಯೋಗ ಮತ್ತು ಅಭಿವೃದ್ಧಿ ಸನ್ನಿವೇಶವನ್ನು ಬದಲಾಯಿಸಲಿರುವ ಈ ಕಾಯ್ದೆಯ ಪ್ರಯೋಜನಗಳನ್ನು ಜನರು ಶೀಘ್ರದಲ್ಲೇ ಅರಿತುಕೊಳ್ಳುತ್ತಾರೆ ಎಂದು ಹೇಳಿದರು.

*****************

ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆಯು ಪ್ರತಿ ಹಣಕಾಸು ವರ್ಷದಲ್ಲಿ ಪ್ರತಿ ಗ್ರಾಮೀಣ ಕುಟುಂಬಕ್ಕೆ ೧೨೫ ದಿನಗಳ ಕೂಲಿ ಉದ್ಯೋಗವನ್ನು ಖಾತರಿಪಡಿಸುತ್ತದೆ. ಇದು ಹಿಂದಿನ ೧೦೦ ದಿನಗಳ ಕೂಲಿ ಉದ್ಯೋಗಕ್ಕಿಂತ ಹೆಚ್ಚು ಎಂದು ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದು ಕೊರತೆ ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ.

ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಗರಿಷ್ಠ ಬಿತ್ತನೆ ಮತ್ತು ಕೊಯ್ಲು ಸಮಯದಲ್ಲಿ ಕೃಷಿ ಕಾರ್ಮಿಕರ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಈ ಯೋಜನೆಯು ಒಟ್ಟು ೬೦ ದಿನಗಳ ಕೆಲಸವಿಲ್ಲದ ಅವಧಿಯನ್ನು ಸಹ ಒದಗಿಸುತ್ತದೆ ಎಂದು ತಿಳಿಸಿದರು.

*****************

ಉದ್ಯಮಿ ಅನಿಲ್ ಅಂಬಾನಿ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದಂತೆ ತಡೆಯುವ ಏಕಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿ ಬ್ಯಾಂಕ್ ಆಫ್ ಬರೋಡ, ಐಡಿಬಿಐ ಬ್ಯಾಂಕ್, ಇಂಡಿಯನ್ ಓವರ್‌ಸಿಸ್ ಬ್ಯಾಂಕ್ ಮತ್ತು ಆಡಿಟರ್ ಬಿಡಿಒ ಇಂಡಿಯಾ ಎಲ್‌ಎಲ್‌ಪಿ ಸಂಸ್ಥೆ, ಬಾಂಬೆ ಹೈಕೋರ್ಟ್‌ನ ವಿಭಾಗೀಯ ಪೀಠದ ಮೊರೆ ಹೋಗಿವೆ. ಆರ್‌ಕಾಮ್ ಮಾಜಿ ಕಾರ್ಯನಿರ್ವಾಹಕ ನಿರ್ದೇಶಕ ಅನಿಲ್

ಅಂಬಾನಿ, ಮೂರು ಬ್ಯಾಂಕ್‌ಗಳ ವಿರುದ್ಧ ಪ್ರತ್ಯೇಕ ಪ್ರಕರಣಗಳನ್ನು ದಾಖಲಿಸಿ, ನೋಟಿಸ್‌ಗಳ ಮೇಲೆ ಕ್ರಮ ಕೈಗೊಳ್ಳದಂತೆ ಹೈಕೋರ್ಟ್ ಅನ್ನು ಕೋರಿದ್ದರು.

*****************

ನವಿ ಮುಂಬೈನ ಡಾ.ಡಿ.ವೈ ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯುಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಆರನೇ ಪಂದ್ಯದಲ್ಲಿಂದು ಮುಂಬೈ ಇಂಡಿಯನ್ಸ್ ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಗುಜರಾತ್ ಜೈಂಟ್ಸ್, ಇತ್ತೀಚಿನ ವರದಿಯಂತೆ, ೨.೪ ಓವರ್‌ಗಳಲ್ಲಿ ಒಂದು ವಿಕೆಟ್ ನಷ್ಟಕ್ಕೆ ೨೨ ರನ್ ಮಾಡಿ ಆಡುತ್ತಿದೆ.

********ಮುಕ್ತಾಯ********